ದಿನಾಂಕ: 20.07.2022 ರಂದು ಬೆಳಗ್ಗೆ 10.30 ಗಂಟೆಗೆ ಕಾಮಾಕ್ಷಿಪಾಳ್ಯ ವಾರ್ಡ್ ನಂ. 101 ರಲ್ಲಿ ಶ್ರೀ ಎ. ಸತ್ಯನಾರಾಯಣರಾಜ್, ನೋಡಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡುವಳಿಗಳ ವಿವರ:-

**ಹಾಜರಿದ್ದ ಪಾಲಿಕೆಯ ಅಧಿಕಾರಿಗಳು ಹಾಗೂ ವಾರ್ಡ್ ಕಮಿಟಿ ಸದಸ್ಯರು:-**

1. ಶ್ರೀ ಎ. ಸತ್ಯನಾರಾಯಣರಾಜ್, ನೋಡಲ್ ಅಧಿಕಾರಿಗಳು ಹಾಗೂ ಸದಸ್ಯರು
2. ಶ್ರೀ ಶ್ರೀನಿವಾಸರಾಜು.ಟಿ ಸಹಾಯಕ ಅಭಿಯಂತರರು, ವಾರ್ಡ್ ನಂ. 101 ಕಾಮಾಕ್ಷಿಪಾಳ್ಯ
3. ಶ್ರೀ ವೆಂಕಟೇಶ್, ಬಿಲ್ ಕಲೆಕ್ಟರ್
4. ಶ್ರೀ ರಘು, ಸ್ಥಳೀಯರು
5. ಶ್ರೀ ಭರತ್, ಸ್ಥಳೀಯರು
6. ಶ್ರೀ ಶಿವಕುಮಾರ್ ಹಾಗೂ ಇತರರು

ದಿನಾಂಕ: 20.07.2022 ಬೆಳಗ್ಗೆ 10.30 ಗಂಟೆಗೆ ವಾರ್ಡ್ ನಂ. 101 ಕಾಮಾಕ್ಷಿಪಾಳ್ಯ ಎಸ್.ಬಿ.ಐ. ಆಫೀಸರ್ಸ್ ಸಮುಧಾಯ ಭವನ, ಎಸ್.ಬಿ.ಐ. ಕಾಲೋನಿ, ಬಸವೇಶ್ವರನಗರ, ಕಾಮಾಕ್ಷಿಪಾಳ್ಯ ಇಲ್ಲಿ ಪಾಲಿಕೆ ಅಧಿಕಾರಿಗಳೊಂದಿಗೆ ಸಭೆಯನ್ನು ಕೈಗೊಂಡು ಈ ಕೆಳಗಿನ ವಿಷಯಗಳನ್ನು ಚರ್ಚಿಸಲಾಯಿತು.

1. ವಾರ್ಡಿನ ಸದಸ್ಯರುಗಳು ವಾರ್ಡಿನ ಕೆಲವು ರಸ್ತೆಗಳಲ್ಲಿ ಮರದ ಕೊಂಬೆಗಳು ನೇತಾಡುತ್ತಿದ್ದು, ಅದನ್ನು ತುರ್ತಾಗಿ ತೆರವುಗೊಳಿಸುವಂತೆ ಅರಣ್ಯಾಧಿಕಾರಿಗಳಿಗೆ ತಿಳಿಸುವಂತೆ ಕೋರಿದರು. ಇದಕ್ಕೆ ಉತ್ತರವಾಗಿ ನೋಡಲ್ ಅಧಿಕಾರಿಗಳು ವಾರ್ಡಿನ ಅಭಿಯಂತರರಿಗೆ ಸೂಚಿಸಿದರು.

2.ಮಳೆಗಾಲ ಪ್ರಾರಂಭವಾಗಿರುವುದರಿಂದ ಚರಂಡಿಯ ಶೋಲ್ಡರ್ ಡ್ರೈನ್‌ಗಳನ್ನು ಶುಚಿಗೊಳಿಸಲು ಕ್ರಮ ಕೈಗೊಳ್ಳುವಂತೆ ತಿಳಿಸಲಾಯಿತು.

3.ಚರಂಡಿಗಳಲ್ಲಿ ಹೂಳು ತೆಗೆಯುವುದರ ಬಗ್ಗೆ ವಾರ್ಡ್ ಸಭೆಯಲ್ಲಿ ಚರ್ಚಿಸಲಾಯಿತು. ಇದಕ್ಕೆ ಉತ್ತರವಾಗಿ ವಾರ್ಡ್ ನಂ. 101 ಸಹಾಯಕ ಅಭಿಯಂತರರು ರವರು ಸದರಿ ಕಾಮಗಾರಿಗೆ ಅಂದಾಜು ಪಟ್ಟಿಯನ್ನು ಸಲ್ಲಿಸಿದ್ದು, ಅನುಮೋದನೆ ದೊರಕಿದ ನಂತರ ಕಾಮಗಾರಿಯು ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಸದಸ್ಯ ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಿದ್ದ ಮಾನ್ಯ ಅಧ್ಯಕ್ಷರಿಗೆ ವಾರ್ಡ್ ಸಮಿತಿ ಸದಸ್ಯರುಗಳಿಗೆ ಮತ್ತು ವಿವಿಧ ಇಲಾಖೆಯ ಅಧಿಕಾರಿಗಳಿಗೆ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

Srinivasraju T 20/7/22
ಸದಸ್ಯ ಕಾರ್ಯದರ್ಶಿ
ವಾರ್ಡ್ ಸಮಿತಿ

ನೋಡಲ್ ಅಧಿಕಾರಿಗಳು
ವಾರ್ಡ್ ನಂ. 101

Scanned by CamScanner